**ಸಾಕ್ಷಿಯನ್ನು ದಿಃ 22.08.2023 ರಂದು ಕರೆಸಿ ಪ್ರಮಾಣ ಬೋಧಿಸಲಾಯಿತು.**

ಮುಖ್ಯ ವಿಚಾರಣೆಃ ಶ್ರೀ.ಆರ್.ವಿ.ಆರ್ ವಕೀಲರಿಂದಃ

ನಾನು ಈ ಪ್ರಕರಣದಲ್ಲಿ ವಾದಿಪರ ಸಾಕ್ಷಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತದೆ ಮತ್ತು ನಾನು ಅದಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ .

ದಿನಾಂಕ 06-01-1990 ರ ಮೃತ್ಯು ಪತ್ರಕ್ಕೆ ನಾನು ಅನುಪ್ರಮಾಣಿತ ಸಾಕ್ಷಿದಾರರಾಗಿ ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ಸಾಕ್ಷಿದಾರರು ನೋಡಿ ಗುರುತಿಸಿರುತ್ತಾರೆ. (ಈ ಸಮಯದಲ್ಲಿ ಪ್ರತಿವಾದಿ ಪರ ವಕೀಲರು ಸದರಿ ಮೃತ್ಯು ಪತ್ರವನ್ನು ನಿಶಾನೆಯಾಗಿ ಗುರುತಿಸಲು ತಕರಾರು ಮಾಡಿರುತ್ತಾರೆ ಸದರಿ ಮೃತ್ಯು ಪತ್ರವನ್ನು ಹಾಜರುಪಡಿಸುವಂತೆ ವಾದಿಗೆ ನೋಟೀಸು ನೀಡಿದಾಗ ಹಾಜರುಪಡಿಸಿಲ್ಲವೆಂದು, ಆ ಕಾರಣ ಈ ಹಂತದಲ್ಲಿ ಅದನ್ನು ಗುರುತಿಸಲು ಸಾಧ್ಯವಿಲ್ಲವೆಂದು ಮತ್ತು ಸದರಿ ಮೃತ್ಯು ಪತ್ರವನ್ನು ಲ್ಯಾಮಿನೇಷನ್ ಮಾಡಲಾಗಿದ್ದು ಆ ಕಾರಣದಿಂದಲೂ ಗುರುತಿಸಬಾರದು ಎಂದು ತಕರಾರು ಮಾಡಿರುತ್ತಾರೆ.) ಸದರಿ ತಕರಾರಿಗೆ ಒಳಪಟ್ಟು ಮೃತ್ಯುಪತ್ರವನ್ನು ನಿಪಿ 8 ಎಂದು ಗುರುತಿಸಲಾಯಿತು. ಸಾಕ್ಷಿದಾರರ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 8(ಎ) ಎಂದು ಗುರುತಿಸಲಾಯಿತು. ಸಾಕ್ಷಿದಾರರು ಮುಂದುವರೆದು ಮೃತ್ಯುಪತ್ರ ಬರೆದುಕೊಟ್ಟರು ಎಂದ ಚಂದ್ರಕಾಂತಮ್ಮ ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 8(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

**sd/-**

**(ಕೇಶವಮೂರ್ತಿ.ಬಿ)**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**

**ಬಂಗಾರಪೇಟೆ**